

# ಶ್ರೀಮುರಳಿಗೆ ಒಲಿದ ‘ಪರಾಕ್’

‘ಬಘೀರ’ ಸಿನಿಮಾ ಚಿತ್ರೀಕರಣ ಸಂದರ್ಭ ಗಾಯಗೊಂಡಿದ್ದ ನಟ ಶ್ರೀಮುರಳಿ ಸಂಪೂರ್ಣವಾಗಿ ಚೇತರಿಸಿಕೊಂಡು ಸಿನಿಮಾಗಳತ್ತ ಮತ್ತೆ ಹೆಜ್ಜೆ ಹಾಕಿದ್ದಾರೆ.

ಮೇ ತಿಂಗಳಿನಲ್ಲಿ ಎಡ ಮಂಡಿಗೆ ಎಸಿಎಲ್ ಶಸ್ತ್ರಚಿಕಿತ್ಸೆ ಮಾಡಿಸಿಕೊಂಡಿದ್ದ ಮುರಳಿ ಇದೀಗ ಚೇತರಿಸಿಕೊಂಡಿದ್ದು, ಹಲವು ಪ್ರಾಜೆಕ್ಟ್‌ಗಳಲ್ಲಿ ತೊಡಗಿಸಿಕೊಳ್ಳುತ್ತಿದ್ದಾರೆ. ‘ಬಘೀರ’ ಚಿತ್ರದ ಟೀಸರ್ ಈಚೆಗೆ ಬಿಡುಗಡೆಯಾಗಿದೆ. ಇದರ ಜೊತೆಗೆ ಹೊಸ ಪ್ರಾಜೆಕ್ಟ್ ಘೋಷಣೆಯಾಗಿದೆ. ‘ಪರಾಕ್’ ಸಿನಿಮಾದಲ್ಲಿ ಹೊಸಬರ ಜೊತೆ ಶ್ರೀಮುರಳಿ ಕೈಜೋಡಿಸಿದ್ದಾರೆ. ಈ ಸಿನಿಮಾ ಕಥೆಯಿಂದ ಪ್ರಭಾವಿತರಾಗಿ ಪ್ರಾಜೆಕ್ಟ್‌ಗೆ ಒಪ್ಪಿಗೆ ನೀಡಿರುವುದಾಗಿ ಮುರಳಿ ಹೇಳಿಕೊಂಡಿದ್ದಾರೆ. ಈ ವರ್ಷಾರಂಭದಲ್ಲಿ ಚಿತ್ರೀಕರಣ ಶುರುವಾಗಲಿದೆ.

ಎಂಜಿನಿಯರ್ ಆಗಿದ್ದ ಹಾಲೇಶ್ ಕೋಗುಂಡಿ ‘ಪರಾಕ್’ ಮೂಲಕ ಚಂದನವನಕ್ಕೆ ಕಾಲಿಡುತ್ತಿದ್ದಾರೆ.

ಇದು ಆ್ಯಕ್ಷನ್ ಸಸ್ಪೆನ್ಸ್ ಎಂಟರ್‌ಟೇನರ್ ಸಿನಿಮಾ ಆಗಿದ್ದು, ಹಿಂದೆಂದೂ ಕಂಡಿರದ ಲುಕ್‌ನಲ್ಲಿ ಶ್ರೀಮುರಳಿ ಅವರನ್ನು ನೋಡಬಹುದು. 2024ರ ಮೇ ಅಥವಾ ಜೂನ್ ತಿಂಗಳಿನಿಂದ ಶೂಟಿಂಗ್ ಅಖಾಡಕ್ಕೆ ಇಳಿಯಲಿರುವುದಾಗಿ ಚಿತ್ರತಂಡ ಹೇಳಿದೆ. ‘ಪರಾಕ್’ ಚಿತ್ರದ ಟೈಟಲ್ ಪೋಸ್ಟರ್ ಕೂಡ ಕುತೂಹಲ ಮೂಡಿಸುವಂತಿದೆ.



# ನಿಧಿ ಯಾನ

ಬಹಳ ದಿನಗಳ ನಂತರ ನಟಿ ನಿಧಿ ಸುಬ್ಬಯ್ಯ, ‘ಮೋನ’ ಪಾತ್ರದ ಮೂಲಕ ಮತ್ತೆ ಪ್ರೇಕ್ಷಕರ ಮುಂದೆ ಬರುತ್ತಿದ್ದಾರೆ.

ನಟ ಅನಿರುದ್ಧ್ ನಾಯಕನಾಗಿ ನಟಿಸಿರುವ ‘chef ಚಿದಂಬರ’ ಚಿತ್ರದಲ್ಲಿ ನಟಿ ನಿಧಿ ಸುಬ್ಬಯ್ಯ ಅಭಿನಯಿಸಿದ್ದಾರೆ. ಮೋನ ಎಂಬ ಪಾತ್ರಕ್ಕೆ ಬಣ್ಣ ಹಚ್ಚಿದ್ದಾರೆ. ಸಿನಿಮಾ ಚಿತ್ರೀಕರಣ ಸದ್ಯ ಪೂರ್ಣಗೊಂಡಿದ್ದು, ಪೋಸ್ಟ್ ಪ್ರೊಡಕ್ಷನ್ ಕೆಲಸ ಬಿರುಸಿನಿಂದ ಸಾಗಿದೆ.

ನಿಧಿ ಸುಬ್ಬಯ್ಯ ಅವರ ಪಾತ್ರವನ್ನು ಪರಿಚಯಿಸುವ ಪೋಸ್ಟರ್ ಕೂಡ ಬಿಡುಗಡೆಯಾಗಿದೆ. ಕೈಯಲ್ಲಿ ಬೇಡಿ ಹಿಡಿದು ನಿಧಿ ಪೋಸ್ ನೀಡಿದ್ದು, ಪಾತ್ರ ಯಾವುದಿರಬಹುದೆಂಬ ಕುತೂಹಲ ಹುಟ್ಟುಹಾಕಿದೆ.

ಡಾರ್ಕ್ ಕಾಮಿಡಿ ಜಾನರ್‌ನ ಈ ಚಿತ್ರದಲ್ಲಿ ಅನಿರುದ್ಧ್ ಶೆಫ್ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಪಾತ್ರಕ್ಕಾಗಿ ಸಾಕಷ್ಟು ತಯಾರಿ ಮಾಡಿಕೊಂಡಿದ್ದಾರೆ. ನಾಯಕಿಯಾಗಿ ನಿಧಿ ಸುಬ್ಬಯ್ಯ ಹಾಗೂ ಲವ್ ಮಾಕ್ಟೇಲ್ ಖ್ಯಾತಿಯ ರೆಚೆಲ್ ಡೇವಿಡ್ ಅಭಿನಯಿಸಿದ್ದಾರೆ.